# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಜಿ. ಶಿವಣ್ಣ, ಸಹಾಯಕ ಕೃಷಿ ಅಧಿಕಾರಿ ಮತ್ತು ಖಜಾಂಚಿ ಭೂತಪ್ಪನ ಕಟ್ಟೆ ಸುಜಲ ಜಲಾನಯನ ಸಂಘ, ಮಂಗನಹಳ್ಳಿ, ಶಿರಾ ತಾಲ್ಲೂಕ್, ತುಮಕೂರು ಜಿಲ್ಲೆ ಇವರ ವಿರುದ್ದ ದಾಖಲಾದ ಲೋಕಾಯುಕ್ತ ತನಿಖೆ ಬಗ್ಗೆ.

**ಓದಲಾಗಿದೆ:-**

2) ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂ. COMPT/UPLOK/BD/117/2007/ARLO-2, ದಿ: 09-03-2011.

2) ಸರ್ಕಾರದ ಆದೇಶ ಸಂಖ್ಯೆ: ಕೃಇ 13 ಕೃಪವಿ 2011, ದಿ: 02-04-2011. ಮತ್ತು 17-06-2011.

3) ಆಯುಕ್ತರು, ಕೃಷಿ ಇಲಾಖೆ ಇವರ ಆದೇಶ ಸಂಖ್ಯೆ: EST-1/INQ-1/22/2005-06. ದಿನಾಂಕ: 27-01-2011.

4) ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂ. COMPT/UPLOK/BD/117/2007/ARLO-2, ದಿ: 14-02-2012.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರ.ಸಂ.(1)ರ ಪತ್ರದಲ್ಲಿ ಶ್ರೀ ಜಿ. ಶಿವಣ್ಣ, ಸಹಾಯಕ ಕೃಷಿ ಅಧಿಕಾರಿ ಭೂತಪ್ಪನ ಕಟ್ಟೆ ಸುಜಲ ಜಲಾನಯನ ಸಂಘ, ಮಂಗನಹಳ್ಳಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ಶ್ರೀನಿವಾಸಪ್ಪ ಎಂಬುವರಿಂದ ಲಂಚ ತೆಗೆದುಕೊಳ್ಳುವಾಗ ಲೋಕಾಯುಕ್ತರಿಗೆ ಸಿಕ್ಕಿ ಬಿದ್ದು ಆರೋಪ ಸಾಬೀತಾಗಿರುವುದರಿಂದ ಕರ್ನಾಟಕ ಲೋಕಾಯುಕ್ತ ಕಾಯ್ದೆ 12 (4) 1984 ಮತ್ತು ಕೆಸಿಎಸ್ ಸಿಸಿಎ ನಿಯಮ 14 ಎ ಪ್ರಕಾರ ಸದರಿ ಅಧಿಕಾರಿಯವರ ವಿರುದ್ದ ತನಿಖೆ ನಡೆಸಲು ಅನುಮತಿ ನೀಡುವಂತೆ ಲೋಕಾಯುಕ್ತರು ಕೋರಿರುತ್ತಾರೆ.

ಸಹಾಯಕ ಕೃಷಿ ಅಧಿಕಾರಿ ವೃಂದಕ್ಕೆ ಶಿಸ್ತು ಪ್ರಾಧಿಕಾರಿಗಳಾದ ಕೃಷಿ ಆಯುಕ್ತರಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 46 ಸೇಇವಿ 2008 ದಿನಾಂಕ: 11-02-2010. ಸಿಆಸುಇ 6 ಸೇಇವಿ 1997 ದಿನಾಂಕ: 02-07-1997 ಹಾಗೂ ಸಿಆಸುಇ 17 ಎಸ್‌ಎಸ್ ಆರ್ 1980 ದಿನಾಂಕ: 28-04-1980ರಲ್ಲಿ ಇಲಾಖಾ ಮುಖ್ಯಸ್ಥರಿಗೆ ಗ್ರೂಪ್-ಬಿ ವೃಂದದ ಅಧಿಕಾರಿಗಳ ಮೇಲೆ ಶಿಸ್ತುಕ್ರಮ ಜರುಗಿಸಲಾಗುವ ಅಧಿಕಾರವನ್ನು ಪ್ರತ್ಯಾಯೋಜಿಸಿರುವಂತೆ ಸದರಿ ಅಧಿಕಾರಿರವರ ವಿರುದ್ದದ ಆರೋಪಗಳಿಗೆ ತನಿಖೆ ನಡೆಸಲು ಲೋಕಾಯುಕ್ತರಿಗೆ ಅನುಮತಿ ನೀಡುವಂತೆ ಮೇಲೆ ಓದಲಾದ ಕ್ರ.ಸಂ.(2)ರ ಪತ್ರದಲ್ಲಿ ನಿರ್ದೇಶಿಸಲಾಗಿತ್ತು.

ಸದರಿ ನಿರ್ದೇಶನದ ಪ್ರಕಾರ ಕೃಷಿ ಆಯುಕ್ತರು ತಮ್ಮ ಮೇಲೆ ಓದಲಾದ ಕ್ರ.ಸಂ.(3)ರ ದಿನಾಂಕ: 27-01-2012ರ ಆದೇಶದಲ್ಲಿ ಶ್ರೀ ಜಿ. ಶಿವಣ್ಣ, ಸಹಾಯಕ ಕೃಷಿ ಅಧಿಕಾರಿ ರವರ ವಿರುದ್ದ ತನಿಖೆ ನಡೆಸಲು ಅನುಮತಿಯನ್ನು ನೀಡಿರುತ್ತಾರೆ. ಆದರೆ ಮಾನ್ಯ ಲೋಕಾಯುಕ್ತರು ತಮ್ಮ ಮೇಲೆ

ಓದಲಾದ ಕ್ರ.ಸಂ.(4)ರ ದಿನಾಂಕ: 14-02-2012ರ ಪತ್ರದಲ್ಲಿ ಸದರಿ ಪ್ರಕರಣದಲ್ಲಿ ತನಿಖೆ ನಡೆಸುವ ಬಗ್ಗೆ ಅನುಮತಿ ನೀಡಲು ಕರ್ನಾಟಕ ನಾಗರಿಕ ಸೇವಾ (ಸಿಸಿಎ) ನಿಯಮಾವಳಿ 1957ರ ನಿಯಮ 14-ಎ(2) (ಎ) (3)ರ ಪ್ರಕಾರ ಸರ್ಕಾರವೇ ಸಕ್ಷಮ ಪ್ರಾಧಿಕಾರವಾಗಿದ್ದು, ಸದರಿ ನಿಯಮಾವಳಿ ಪ್ರಕಾರ ತನಿಖೆಯನ್ನು ನಡೆಸಲು ಅನುಮತಿ ನೀಡುವಂತೆ ಕೋರಿರುತ್ತಾರೆ.

ಮಾನ್ಯ ಲೋಕಾಯುಕ್ತರು ಕೋರಿರುವ ಪ್ರಕಾರ ಶ್ರೀ ಜಿ. ಶಿವಣ್ಣ, ಸಹಾಯಕ ಕೃಷಿ ಅಧಿಕಾರಿ ಇವರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1) (i)& (iii) ಪ್ರಕಾರ ತಪ್ಪೆಸಗಿದ್ದಾರೆಂದು ಮೇಲು ನೋಟಕ್ಕೆ (prima-facie) ಕಂಡು ಬಂದಿದ್ದರಿಂದ, ಅವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ಪ್ರಕಾರ ಶಿಸ್ತು ಕ್ರಮ ಕೈಗೊಳ್ಳಲು ಪ್ರಕರಣವನ್ನು **ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ) ನಿಯಮ 14-ಎ ಪ್ರಕಾರ ಮಾನ್ಯ ಉಪ** ಲೋಕಾಯುಕ್ತರವರಿಗೆ ವಹಿಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 13 ಕೃಪವಿ 2011**
**ಬೆಂಗಳೂರು, ದಿನಾಂಕ: 20-06-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಜಿ. ಶಿವಣ್ಣ, ಸಹಾಯಕ ಕೃಷಿ ಅಧಿಕಾರಿ ಮತ್ತು ಖಜಾಂಚಿ ಭೂತಪ್ಪನ ಕಟ್ಟೆ ಸುಜಲ ಜಲಾನಯನ ಸಂಘ, ಮಂಗನಹಳ್ಳಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ಶ್ರೀನಿವಾಸಪ್ಪ ಎಂಬುವರಿಂದ ಲಂಚ ತೆಗೆದುಕೊಳ್ಳುವಾಗ ಲೋಕಾಯುಕ್ತರಿಗೆ ಸಿಕ್ಕಿ ಬಿದ್ದ ಆರೋಪಕ್ಕೆ ಸಂಬಂಧಿಸಿದಂತೆ, ಅವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ಸಿ.ಸಿ.ಎ.) ನಿಯಮಾವಳಿ 1957ರಡಿ ಇಲಾಖಾ ವಿಚಾರಣಾ ಕ್ರಮವನ್ನು ಆಯೋಜಿಸಲು ಅದೇ ನಿಯಮಾವಳಿ ನಿಯಮ 14(ಎ) ರನ್ವಯ ಸದರಿ ಪ್ರಕರಣವನ್ನು ಕರ್ನಾಟಕ ಉಪ-ಲೋಕಾಯುಕ್ತರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

20/6/12
(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪ ಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

--3--